ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಹೆಚ್ಚುವರಿ ಜೆಎಂಎಫ್ ಸಿ ನ್ಯಾಯಾಲಯ
ರಾಣೇಬೆನ್ನೂರು.
ಸಿ.ಸಿ.ಸಂಖ್ಯೆಃ 151/2023

ಪಿ ಡಬ್ಲ್ಯೂಃ 2
ಸಿ ಡಬ್ಲ್ಯೂಃ 2

| | | |
|---|---|---|
| ಸಾಕ್ಷಿಯ ಹೆಸರು | : | ಸಂತೋಷ್ |
| ತಂದೆಯ ಹೆಸರು | : | ಲಕ್ಷಮ್ಮಪ್ಪ ಪೂಜಾರ್ |
| ವಯಸ್ಸು | : | 40 |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಮೇಡ್ಲೇರಿ |

ದಿನಾಂಕಃ 10-02-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ</u>

ಸಾಕ್ಷಿದಾರರಿಗೆ ನಿಪಿ-2 ನ್ನು ತೋರಿಸಲಾಗಿ ಅದರಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ ಕಾರಣ ಸದರಿ ಪಂಚನಾಮೆಯನ್ನು ನಿಪಿ **2** ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನು 2021 ರಲ್ಲಿ ಮಾಡಿರುತ್ತೇನೆ. ಪಂಚನಾಮೆಯನ್ನು 7.30 ರಿಂದ 8.30 ರವರೆಗೆ ಜರುಗಿಸಿರುತ್ತಾರೆ. ಆರೋಪಿಯನ್ನು ದಸ್ತುಗಿರಿ ಮಾಡುತ್ತಿದ್ದು ಸಾಕ್ಷಿಗಾಗಿ ನಾನು ಸಹಿ ಮಾಡಿರುತ್ತೇನೆ. 90 ಎಂ ಎಲ್ ಹೈವಡ್ಸ ವಿಸ್ಕಿ ಆರೋಪಿಯ ಬಳಿ ಇರುವ ವಿಚಾರವಾಗಿ ಪಂಚನಾಮೆಯನ್ನು ಜರುಗಿಸಿರುತ್ತಾರೆ. ಚಾ ಸಾ 3 ರವರು ಸಹ ಹಾಜರಿರುತ್ತಾರೆ. ಪಂಚನಾಮೆಯನ್ನು ಜರುಗಿಸಿ ನಂತರ ಸಹಿ ತೆಗೆದುಕೊಂಡಿರುತ್ತಾರೆ.

ಸಾಕ್ಷಿದಾರರು ಆರೋಪಿಯನ್ನು ನೋಡಿ ಗುರುತಿಸಿರುವುದಿಲ್ಲ. ಮುದ್ದೆ ಮಾಲುಗಳನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ಎಂ ಎಸ್ ಐ ಎಲ್ ನಲ್ಲಿ ನಾನು ಕೆಲಸ ಮಾಡುತ್ತೇನೆ ಎಂದರೆ 2020 ರಲ್ಲಿ ಕೆಲಸ ಮಾಡುತ್ತಿದ್ದು ಪ್ರಸುತ್ತವಾಗಿ ಕೆಲಸ ಬಿಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ವಿಚಾರದಿಂದ ಅಬಕಾರಿ ಅಧಿಕಾರಿಗಳು ಪರಿಚಯ ಇದ್ದರು ಎಂದರೆ ಮೊದಲು ಪರಿಚಯ ಇದ್ದರು ಈಗ ಇಲ್ಲ ಎಂದು ನುಡಿಯುತ್ತಾರೆ. ಕಚೇರಿ ವಿಚಾರವಾಗಿ ಅಧಿಕಾರಿಗಳು ಹೇಳಿದ ಕೆಲಸಗಳನ್ನು ನಾನು ಮಾಡುತ್ತೇನೆ. ರಾಯಣ್ಣ ಸರ್ಕಲ್ ಬಸ್ಸು ನಿಲ್ದಾಣದ ಬಳಿ ಆರೋಪಿಯು ಇದ್ದರು. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ತಿಳಿದಿಲ್ಲ. ಘಟನಾ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ. ಘಟನಾ ಸ್ಥಳದಲ್ಲಿ

ಆರೋಪಿಯನ್ನು ದಸ್ತುಗಿರಿ ಮಾಡಿದ ಮೇಲೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಅದರ ವಿಚಾರವಾಗಿ ನಾನು ಸಹಿ ಮಾಡಿರುತ್ತೇನೆ. ನನಗೆ ಯಾವುದೇ ನೋಟಿಸ್ ನೀಡಿರುವುದಿಲ್ಲ. ಎಂ ಎಸ್ ಐ ಎಲ್ ನಲ್ಲಿ ಈಗಾಲೂ ಕೆಲಸ ಮಾಡುತ್ತಿರುವ ಕಾರಣ ಅಬಕಾರಿ ಅಧಿಕಾರಿಗಳ ಆದೇಶದ ಮೇರೆಗೆ ಸುಳ್ಳು ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾ.ದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ/-

ಓ ಹೇ ಕೆ ಸರಿ ಇದೆ. C/c. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.